# ಸ್ವತಃ ಅಖಾಡಕ್ಕಿಳಿದ ಗೌತಮ್ ಅದಾನಿ; ಡಿಕೆಶಿ ನಿವಾಸಕ್ಕೆ ದಿಢೀರ್ ಭೇಟಿ

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರಿನ ಟ್ರಾಫಿಕ್ ಸಮಸ್ಯೆಗೆ ಶಾಶ್ವತ ಮುಕ್ತಿ ನೀಡಲು ರಾಜ್ಯ ಸರ್ಕಾರ ರೂಪಿಸಿರುವ ಮಹತ್ವಾಕಾಂಕ್ಷೆಯ ಬೆಂಗಳೂರು ಸುರಂಗ ರಸ್ತೆ ಯೋಜನೆ ಹೊಸ ತಿರುವು ಪಡೆದುಕೊಂಡಿದೆ.

ಬೆಂಗಳೂರು ಸುರಂಗ ರಸ್ತೆ ಯೋಜನೆಗೆ ಅತಿ ಕಡಿಮೆ ಬಿಡ್ ಸಲ್ಲಿಸಿದ ಅದಾನಿ ಸಮೂಹ ಸಂಸ್ಥೆಗಳ ಅಧ್ಯಕ್ಷ ಗೌತಮ್ ಅದಾನಿ ಅವರು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ನಿವಾಸಕ್ಕೆ ದಿಢೀರ್ ಭೇಟಿ ನೀಡಿ, ಯೋಜನೆ ಬಗ್ಗೆ ಮಹತ್ವದ ಚರ್ಚೆ ನಡೆಸಿದ್ದು, ತೀವ್ರ ಕುತೂಹಲಕ್ಕೆ ಕಾರಣವಾಗಿದೆ. ಇಂದು ಬೆಳಗ್ಗೆ ಬೆಂಗಳೂರಿನ ಸದಾಶಿವನಗರದಲ್ಲಿ ಡಿಕೆ ಶಿವಕುಮಾರ್ ಅವರ ನಿವಾಸಕ್ಕೆ ಆಗಮಿಸಿದ

**ಅತ್ತ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಅದಾನಿ ಪ್ರಧಾನಿ ನರೇಂದ್ರ ಮೋದಿ ಅವರ ಆಪ್ತ ಎಂದು ಟೀಕೆ ಮಾಡುತ್ತಿದ್ದರೆ, ಇತ್ತ ಸಿಎಂ ಡಿ.ಕೆ.ಶಿವಕುಮಾರ್ ಅವರು ಗೌತಮ್ ಅದಾನಿಯನ್ನು ಭೇಟಿಯಾಗಿರುವುದು ಎಲ್ಲರೂ ಹುಬ್ಬೇರಿಸುವಂತೆ ಮಾಡಿದೆ.**

**ಆಪ್ತ ಎಂದು ಟೀಕೆ**


ಉದಯವಾಹಿನಿ ಚಿತ್ರ

ಗೌತಮ್ ಅದಾನಿ, ಸಿಎಂ ಜೊತೆ ಕೆಲ ಹೊತ್ತು ಚರ್ಚೆ ನಡೆಸಿದ್ದಾರೆ. ಮುಖ್ಯಮಂತ್ರಿ ಕಚೇರಿ ಮತ್ತು ಅದಾನಿ ಗ್ರೂಪ್ ಈವರೆಗೆ ಸಭೆಯ ಬಗ್ಗೆ ಯಾವುದೇ ಅಧಿಕೃತ ಹೇಳಿಕೆ ನೀಡಿಲ್ಲ. ಸಭೆಯ ನಂತರ ಶಿವಕುಮಾರ್ ಅವರು ಅದಾನಿಯನ್ನು ಬೀಳ್ಕೊಡುತ್ತಿರುವ ದೃಶ್ಯ ವಿಡಿಯೋದಲ್ಲಿ ಸೆರೆಯಾಗಿದೆ. ಉದ್ಯಮಿ ಗೌತಮ್ ಅದಾನಿ ಅವರು ಆರ್ಟ್ ಆಫ್ ಲಿವಿಂಗ್‌ಗೆ ಆಗಮಿಸಿದ್ದರು. ಆರ್ಟ್ ಆಫ್ ಲಿವಿಂಗ್‌ಗೆ ಭೇಟಿ ಬಳಿಕ ಅದಾನಿ ಅವರು ಸಿಎಂ ಡಿಕೆ ಶಿವಕುಮಾರ್ ಅವರ ನಿವಾಸಕ್ಕೆ ಆಗಮಿಸಿ, ಸುಮಾರು 20 ನಿಮಿಷಗಳ ಕಾಲ ಚರ್ಚೆ ನಡೆಸಿರುವುದು ರಾಜಕೀಯವಾಗಿ ಕುತೂಹಲ ಕೆರಳಿಸಿದೆ. ಕಾಂಗ್ರೆಸ್ ಹೈ ಕಮಾಂಡ್ ಅದಾನಿ ವಿರುದ್ಧ ನಿರಂತರ ರಾಜಕೀಯ ಟೀಕೆ, ವಾಗ್ದಾಳಿ ನಡೆಸುತ್ತಿದ್ದರೆ, ಇತ್ತ ಕರ್ನಾಟಕ ಸಿಎಂ ಅದಾನಿಯನ್ನು ಭೇಟಿ ಮಾಡಿ ಚರ್ಚೆ ನಡೆಸಿರುವುದು ಹಲವು ಪ್ರಶ್ನೆಗಳನ್ನು ಹುಟ್ಟು ಹಾಕಿದೆ.

# KSRTC ಬಸ್ಸಿನಲ್ಲಿ ಯುವತಿ ಜೊತೆ ಯುವಕನ ಅನುಚಿತ ವರ್ತನೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

KSRTC ಬಸ್ಸಿನಲ್ಲಿ ಯುವತಿ ಜೊತೆ ಅನುಚಿತವಾಗಿ ವರ್ತಿಸಿದ ಯುವಕನಿಗೆ ಸಾರ್ವಜನಿಕರು ಧರ್ಮದೇಟು ನೀಡಿರುವ ಘಟನೆ ನಡೆದಿದೆ. ನೆಲಮಂಗಲ ಬಳಿಯ ಸೋಲೂರು ಬಳಿ ಇಂದು ಬೆಳಗಿನ ಜಾವ ಹಾಸನದಿಂದ ಬೆಂಗಳೂರು ಕಡೆಗೆ ತೆರಳುತ್ತಿದ್ದ KSRTC ಬಸ್ಸಿನಲ್ಲಿ ಈ ಘಟನೆ ನಡೆದಿದೆ. ಮಧ್ಯರಾತ್ರಿ ಜರ್ನಿ ವೇಳೆಯಲ್ಲಿ ಚಳಿಯಲ್ಲಿ ಬೆಚ್ಚಗೆ ಮಾಡಿಕೊಳ್ಳುವ ಯತ್ನಿಸಿದ್ದ ಯುವಕನಿಗೆ ಚಪ್ಪಲಿಯಲ್ಲಿ ಹೊಡೆದು ಯುವತಿ, ಗ್ರಹಚಾರ ಬಿಡಿಸಿದ್ದಾಳೆ. ಚಲಿಸುತ್ತಿದ್ದ ಬಸ್ ನಲ್ಲಿ ಯುವತಿಯೊಬ್ಬರಿಗೆ BMTC ಕಂಡಕ್ಟರ್ ಅನುಚಿತ ವರ್ತನೆ Video ವೈರಲ್ ಬಳಿಕ ಯುವತಿ ಕಣ್ಣೀರು ಹಾಕುತ್ತಿದ್ದಂತೆಯೇ ಸಹ ಪ್ರಯಾಣಿಕರು ಆಕೆಯ ಬೆಂಬಲಕ್ಕೆ ನಿಂತಿದ್ದು, ಯುವಕನನ್ನು ಹಿಗ್ಗಾಮುಗ್ಗಾ ಥಳಿಸಿದ್ದಾರೆ. ಪೊಲೀಸ್ ಠಾಣೆಗೆ ಬಸ್ ತಿರುಗಿಸಿ ಎಂದ ಪ್ರಯಾಣಿಕರು ಪಟ್ಟು ಹಿಡಿದಿದ್ದಾರೆ. ಕೊನೆಗೆ ನಿದ್ದೆಯಲ್ಲಿ ನನ್ನಿಂದ ತಪ್ಪಾಗಿದೆ ಎಂದು ಯುವಕ ಕ್ಷಮೆಯಾಚಿಸಿದ್ದಾನೆ.

## ಶೂನ್ಯ ಬಡ್ಡಿ ದರ ಕೃಷಿ ಸಾಲಮಿತಿ 5 ಲಕ್ಷ ರೂ ಗೆ ಏರಿಕೆ ಸದುಪಯೋಗಕ್ಕೆ ಕರೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಸಹಕಾರ ಸಂಘಗಳ ಮೂಲಕ ರೈತ ಸದಸ್ಯರಿಗೆ ನೀಡುವ ಶೂನ್ಯ ಬಡ್ಡಿ ದರದ ಸಾಲಮಿತಿಯನ್ನು 5 ಲಕ್ಷ ರೂ.ಗಳಿಗೆ ಏರಿಸಲಾಗಿದ್ದು, ಈ ಸಂಬಂಧ ಸರ್ಕಾರದಿಂದ ಅಧಿಕೃತ ಸುತ್ತೋಲೆ ಹೊರಡಿಸಲಾಗಿದೆ. ರೈತರಿಗೆ ಸಹಕಾರಿ ಸಂಘಗಳ ಮೂಲಕ ನೀಡುವ ಶೂನ್ಯ ಬಡ್ಡಿ ದರದ ಬೆಳೆ ಸಾಲ ಮಿತಿಯನ್ನು 2023-24ನೇ ಸಾಲಿನಲ್ಲಿ ಸರ್ಕಾರ 3ರಿಂದ 5 ಲಕ್ಷ ರೂ.ಗೆ ಏರಿಕೆ ಮಾಡಲಾಗಿತ್ತು. ಆದರೆ ನಬಾರ್ಡ್ ಇದಕ್ಕೆ ಬೇಕಾದ ಮೊತ್ತವನ್ನು ಬಿಡುಗಡೆಗೊಳಿಸದ ಕಾರಣ ಅನೇಕ ರೈತರು ಈ ಯೋಜನೆಯಿಂದ ವಂಚಿತರಾಗಿದ್ದರು. 2026-27ನೇ ಸಾಲಿನಲ್ಲಿ ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ನೀಡುವ 5 ಲಕ್ಷ ರೂ.ವರೆಗಿನ ಕೃಷಿ ಸಾಲ ಮತ್ತು 2 ಲಕ್ಷ ರೂ.ವರೆಗಿನ ಪಶು ಸಂಗೋಪನೆ ಮತ್ತು ಮೀನುಗಾರಿಕೆ ದುಡಿಯುವ ಬಂಡವಾಳ ಸಾಲ ಹಾಗೂ ಶೇ.3 ಬಡ್ಡಿ ದರದಲ್ಲಿ ನೀಡುವ 15 ಲಕ್ಷ ರೂ. ಮಧ್ಯಮಾವಧಿ ಸಾಲ ವಿತರಿಸುವಂತೆ ಸೂಚಿಸಲಾಗಿದೆ. ಶೇ.3 ಬಡ್ಡಿ ದರದ ಸಾಲದ ಮಿತಿ ಗರಿಷ್ಠ 10 ಲಕ್ಷ ರೂ. ಆಗಿತ್ತು. ಕನಿಷ್ಠ ಶೇ.10ರಷ್ಟು ಹೊಸ ಸದಸ್ಯರಿಗೆ, ಶೇ.24.10ರಷ್ಟು ಪ.ಜಾತಿ, ಪಂಗಡದ ಸದಸ್ಯರಿಗೆ ಸಾಲ ವಿತರಿಸಲು ನಿರ್ದೇಶನ ನೀಡಲಾಗಿದೆ.

ಪ್ರಿಯ ರೈತರೇ, ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ 5 ಲಕ್ಷ ರೂ.ಪಡೆದ ಬೆಳೆ ಸಾಲವನ್ನು ಗರಿಷ್ಠ ಒಂದು ವರ್ಷದೊಳಗೆ ಬಡ್ಡಿರಹಿತವಾಗಿ ಮರುಪಾವತಿಸಿದಲ್ಲಿ ಸರ್ಕಾರದಿಂದ ಪ್ರತಿವರ್ಷ ಬಡ್ಡಿ ಸಹಾಯಧನ ಪಾವತಿಸಲಾಗುತ್ತದೆ.

## ಸ್ಟೀಲ್‌ಬರ್ಡ್ ಕಂಪನಿಯಿಂದ 500 ಉಚಿತ ಹೆಲ್ಮೆಟ್ ವಿತರಣೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ದ್ವಿಚಕ್ರ ವಾಹನ ಸವಾರರ ಸುರಕ್ಷತೆ ಹಾಗೂ ರಸ್ತೆ ಅಪಘಾತಗಳಲ್ಲಿ ಸಂಭವಿಸುವ ತಲೆಯ ಗಾಯಗಳನ್ನು ತಡೆಗಟ್ಟುವ ಉದ್ದೇಶದಿಂದ ಸ್ಟೀಲ್‌ಬರ್ಡ್ ಹೆಲ್ಮೆಟ್ ಕಂಪನಿ ಹಾಗೂ ಗಾಂಧಿನಗರ ವಿಧಾನಸಭಾ ಕ್ಷೇತ್ರ ಶೇಷಾದ್ರಿಪುರಂ ಸಂಚಾರ ಪೊಲೀಸ್ ಠಾಣೆ ವತಿಯಿಂದ ಶೇಷಾದ್ರಿಪುರಂ ಸ್ಲಂ ಬೋರ್ಡ್ ಸಿಗ್ನಲ್‌ನಲ್ಲಿ ಹೆಲ್ಮೆಟ್ ಜಾಗೃತಿ ಅಭಿಯಾನ ಹಾಗೂ ಉಚಿತ ಫುಲ್‌ಫೇಸ್ ಹೆಲ್ಮೆಟ್ ವಿತರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಮಾಜಿ ಆರೋಗ್ಯ ಸಚಿವ ಹಾಗೂ ಗಾಂಧಿನಗರ ಶಾಸಕ ದಿನೇಶ್ ಗುಂಡೂರಾವ್ , ಬೆಂಗಳೂರು ನಗರ ಸಂಚಾರ ವಿಭಾಗದ ಜಂಟಿ ಪೊಲೀಸ್ ಆಯುಕ್ತ ಐಪಿಎಸ್ ಅಧಿಕಾರಿ ಕಾರ್ತಿಕ್ ರೆಡ್ಡಿ ಸೇರಿದಂತೆ ಪೊಲೀಸ್ ಅಧಿಕಾರಿಗಳು ಹಾಗೂ ಗಣ್ಯರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ದ್ವಿಚಕ್ರ ವಾಹನ ಸವಾರರಿಗೆ 500 ಫುಲ್‌ಫೇಸ್ ಹೆಲ್ಮೆಟ್‌ಗಳನ್ನು ಉಚಿತವಾಗಿ ವಿತರಿಸಿ, ಸುರಕ್ಷಿತ ವಾಹನ ಚಾಲನೆ ಮತ್ತು ಗುಣಮಟ್ಟದ ಹೆಲ್ಮೆಟ್ ಬಳಕೆಯ ಕುರಿತು ಜಾಗೃತಿ ಮೂಡಿಸಲಾಯಿತು.

ವಿಶೇಷವಾಗಿ ಕ್ಯಾಪ್ ಮಾದರಿಯ ಹೆಲ್ಮೆಟ್‌ಗಳ ಬಳಕೆಯಿಂದಾಗುವ ಅಪಾಯಗಳ ಬಗ್ಗೆ ಸವಾರರಿಗೆ ಮಾಹಿತಿ ನೀಡಿ, ನಿಯಮಾನುಸಾರ ಸುರಕ್ಷಿತ ಹೆಲ್ಮೆಟ್ ಧರಿಸುವಂತೆ ಮನವಿ ಮಾಡಲಾಯಿತು. ಶಾಸಕ ದಿನೇಶ್ ಗುಂಡೂರಾವ್ ಮಾತನಾಡಿ, ''ಕರ್ನಾಟಕ ಸರ್ಕಾರ ವಾಹನ ಸವಾರರ ಸುರಕ್ಷತೆಗಾಗಿ ಕ್ಯಾಪ್ ಹೆಲ್ಮೆಟ್ ಬಳಕೆಯನ್ನು ನಿಷೇಧಿಸುವ ಕ್ರಮ ಕೈಗೊಂಡಿದೆ. ದ್ವಿಚಕ್ರ ವಾಹನ ಸವಾರರು ಕೇವಲ ಪೊಲೀಸ್ ದಂಡದ ಭಯದಿಂದಲ್ಲ, ತಮ್ಮ ಕುಟುಂಬದ ಸುರಕ್ಷತೆಯ ದೃಷ್ಟಿಯಿಂದಲೂ ಕಡ್ಡಾಯವಾಗಿ ಗುಣಮಟ್ಟದ ಫುಲ್‌ಫೇಸ್ ಹೆಲ್ಮೆಟ್ ಧರಿಸಬೇಕು. ರಸ್ತೆ ಸುರಕ್ಷತೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ,'' ಎಂದು ಹೇಳಿದರು.

## ಬೆಂಗಳೂರು ಮೆಟ್ರೋ ಪ್ರಯಾಣಿಕರಿಗೆ ಗುಡ್‌ನ್ಯೂಸ್

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಮೆಟ್ರೋ ಪ್ರಯಾಣಿಕರಿಗೆ ಗುಡ್‌ನ್ಯೂಸ್ ಸಿಗುವ ಸಾಧ್ಯತೆಯಿದೆ. ಆಗಸ್ಟ್ 15ರಂದು ಆರಂಭವಾಗಬೇಕಿದ್ದ ನಮ್ಮ ಮೆಟ್ರೋ ಪಿಂಕ್ ಲೈನ್ ಸಂಚಾರ ಇದೀಗ ಅಗತ್ಯ ಅನುಮತಿಗಳು ದೊರೆತರೆ ಸೆಪ್ಟೆಂಬರ್ ಮೊದಲ ವಾರದಲ್ಲಿ ಆರಂಭವಾಗುವ ನಿರೀಕ್ಷೆಯಿದೆ.ರೈಲ್ವೆ ಮಂಡಳಿಯ ಅನುಮತಿ ಹಾಗೂ ಮೆಟ್ರೋ ರೈಲು ಸುರಕ್ಷತಾ ಆಯುಕ್ತರ ಪರಿಶೀಲನೆ ಪೂರ್ಣಗೊಂಡ ಬಳಿಕ ಸಾರ್ವಜನಿಕ ಸೇವೆಗೆ ಮಾರ್ಗ ಮುಕ್ತವಾಗಲಿದೆ.ಟಿಎನ್‌ಐಗೆ ಮಾಹಿತಿ ನೀಡಿದ ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕ ಪಿ.ಸಿ. ಜಾಫರ್ ಅವರು, ಎತ್ತರಿಸಿದ ಪಿಂಕ್ ಲೈನ್‌ಗೆ ಸಂಬಂಧಿಸಿದಂತೆ ರೈಲ್ವೆ ಮಂಡಳಿಯಿಂದ ರೈಲುಗಳ ಸಂಚಾರಕ್ಕೆ ಅನುಮತಿ ಪಡೆಯುವುದು ಮಾತ್ರ ಬಾಕಿಯಿದೆ ಎಂದು ತಿಳಿಸಿದ್ದಾರೆ. ರೈಲ್ವೆ ಮಂಡಳಿಯ ಅನುಮತಿ ದೊರೆತ ಬಳಿಕ ಮೆಟ್ರೋ ರೈಲು ಸುರಕ್ಷತಾ ಆಯುಕ್ತರು ಮಾರ್ಗದ ಪರಿಶೀಲನೆ ನಡೆಸಲಿದ್ದಾರೆ. ಬಿಎಂಆರ್‌ಸಿಎಲ್‌ನ ಕಡೆಯಿಂದ ಎಲ್ಲಾ ಕಾಮಗಾರಿಗಳೂ ಪೂರ್ಣಗೊಂಡಿವೆ ಎಂದು ಹೇಳಿದ್ದಾರೆ.ಸೆಪ್ಟೆಂಬರ್‌ನಲ್ಲಿ ಮಾರ್ಗವನ್ನು ಆರಂಭಿಸಬಹುದು. ಆದರೆ, ನಿಖರ ದಿನಾಂಕವು ಅಗತ್ಯ ಕಾನೂನುಬದ್ಧ ಅನುಮತಿಗಳು ಯಾವಾಗ ದೊರೆಯುತ್ತವೆ ಎಂಬುದರ ಮೇಲೆ ಅವಲಂಬಿತವಾಗಿರುತ್ತದೆ ಎಂದು ತಿಳಿಸಿದ್ದಾರೆ.

## ಪಾಗಲ್ ಪ್ರೇಮಿಯ ಕಿರುಕುಳಕ್ಕೆ ಬೇಸತ್ತು ಕೆರೆಗೆ ಹಾರಿ ಯುವತಿ ಆತ್ಮಹತ್ಯೆ!

• ಉದಯವಾಹಿನಿ, ಬೆಂಗಳೂರು

ಪಾಗಲ್ ಪ್ರೇಮಿಯ ಕಿರುಕುಳಕ್ಕೆ ಬೇಸತ್ತು ಯುವತಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೆಂಗಳೂರಿನ ಎಚ್‌ಎಸ್‌ಆರ್ ಲೇಔಟ್‌ನಲ್ಲಿ ನಡೆದಿದೆ. ಯುವಕನ ಕಾಟಕ್ಕೆ ನೊಂದ ಯುವತಿ ಆಗರ ಕೆರೆಗೆ ಹಾರಿ ಆತ್ಮಹತ್ಯೆಗೆ ಶರಣಾಗಿದ್ದಾಳೆ. ಅಪ್ಪನ ಮರ್ಯಾದೆ ಹೋಗಬಾರದು ಎಂದು ಆತ್ಮಹತ್ಯೆ ನಿರ್ಧಾರ ಮಾಡಿದ ಯುವತಿ, ಡೆತ್‌ನೋಟ್‌ನಲ್ಲಿ ಯುವಕನ ಕಿರುಕುಳದ ಬಗ್ಗೆ ಬರೆದಿದ್ದಾಳೆ.

22 ವರ್ಷದ ವಾಣಿ ಆತ್ಮಹತ್ಯೆ ಮಾಡಿಕೊಂಡ ಯುವತಿ. ಈಕೆ ಶಿವಮೊಗ್ಗ ಜಿಲ್ಲೆ ಸಾಗರ ತಾಲ್ಲೂಕಿನ ಬೆಳಮಕ್ಕಿ ಮೂಲದವರಾಗಿದ್ದಾಳೆ. ಕ್ಲಾಸ್ ಮೇಟ್ ಆಗಿದ್ದ ಅಭಿಷೇಕ್ ಎಂಬಾತನ ವಿರುದ್ಧ ಯುವತಿಗೆ ಕಿರುಕುಳ ನೀಡಿದ ಆರೋಪ ಕೇಳಿ ಬಂದಿದೆ.ವಾಣಿ ಮತ್ತು ಅಭಿಷೇಕ್ ಕಾಲೇಜಿನಲ್ಲಿ ಒಟ್ಟಿಗೆ ಓದುತಿದ್ದರಂತೆ. ಸುಮಾರು ಒಂದು ವರ್ಷದ ಹಿಂದೆ ಕೆಲಸ ಹುಡುಕಿ ಬೆಂಗಳೂರಿಗೆ ಬಂದಿದ್ದ ಯುವತಿ ವಾಣಿ, ಚಿನ್ನದ ಅಂಗಡಿಯೊಂದರಲ್ಲಿ ಕೆಲಸಕ್ಕೆ ಸೇರಿಕೊಂಡಿದ್ದಳು.

ಯುವತಿಗೆ ವಾಟ್ಸಾಪ್‌ನಲ್ಲಿ ವಿಡಿಯೋ, ಫೋಟೋಸ್ ಕಳುಹಿಸಿ ಅಭಿಷೇಕ್ ಬ್ಲ್ಯಾಕ್ ಮೇಲ್ ಮಾಡುತಿದ್ದ ಎನ್ನಲಾಗಿದೆ.

# ವಾಲ್ಮೀಕಿ ನಿಗಮ ಹಗರಣ: ರಾಜ್ಯಪಾಲರ ಅನುಮತಿ ಕೋರಿದ CBI

## ರಾಜ್ಯಪಾಲರು ಈ ಕುರಿತು ಕಾನೂನು ಮತ್ತು ಸಂವಿಧಾನ ತಜ್ಞರ ಅಭಿಪ್ರಾಯವನ್ನು ಕೇಳಿದ್ದು, ಶೀಘ್ರದಲ್ಲೇ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ

• ಉದಯವಾಹಿನಿ, ಬೆಂಗಳೂರು

**1** ಪ್ರಾಸಿಕ್ಯೂಷನ್‌ಗೆ ಅನುಮತಿ ಅಗತ್ಯವೇಕೆ?
**2** ರಾಜ್ಯ ಸರ್ಕಾರವನ್ನು ಸಂಪರ್ಕಿಸಬೇಕಿತ್ತು
**3** ತನಿಖೆ ನಡೆಸಿ ಆರೋಪಪಟ್ಟಿ ಸಲ್ಲಿಸಿದೆ

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ರೂಪಾಯಿ ಹಗರಣಕ್ಕೆ ಸಂಬಂಧಿಸಿದಂತೆ ಸಚಿವ ಬಿ. ನಾಗೇಂದ್ರ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲು ರಾಜ್ಯಪಾಲರ ಅನುಮತಿ ಕೋರಿ ಸಿಬಿಐ ಪತ್ರ ಬರೆದಿದೆ ಎನ್ನಲಾಗಿದ್ದು, ಇದರೊಂದಿಗೆ ಸಚಿವರ ಸಂಕಷ್ಟ ಮತ್ತಷ್ಟು ಹೆಚ್ಚಾಗಿದೆ.

ಮೂಲಗಳ ಪ್ರಕಾರ, ಸಿಬಿಐ ಸುಮಾರು ಒಂದು ವಾರದ ಹಿಂದೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಪತ್ರ ಬರೆದು ಪ್ರಕರಣದ ವಿವರಗಳನ್ನು ಒದಗಿಸಿದೆ ಎಂದು ತಿಳಿದುಬಂದಿದೆ. ನಾಗೇಂದ್ರ ಅವರನ್ನು ವಿಚಾರಣೆ ನಡೆಸಲು ಹಾಗೂ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಅನುಮತಿ ನೀಡುವಂತೆ ಮನವಿ ಮಾಡಿದೆ ಎನ್ನಲಾಗಿದೆ ಎಂದು ಹೇಳಲಾಗುತ್ತಿದೆ.

ರಾಜ್ಯಪಾಲರು ಈ ಕುರಿತು ಕಾನೂನು ಮತ್ತು ಸಂವಿಧಾನ ತಜ್ಞರ ಅಭಿಪ್ರಾಯವನ್ನು ಕೇಳಿದ್ದು, ಶೀಘ್ರದಲ್ಲೇ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ. 2024ರ ಆಗಸ್ಟ್‌ನಲ್ಲಿ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ನಿವೇಶನ ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದರು. ಬಳಿಕ ಹೈಕೋರ್ಟ್ ಕೂಡ ಆ ಅನುಮತಿಯನ್ನು ಎತ್ತಿಹಿಡಿದಿತ್ತು.

ನಾಗೇಂದ್ರ ಅವರ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ ಮತ್ತು ಜೆಡಿಎಸ್ ಈಗಾಗಲೇ ಹೋರಾಟ ಆರಂಭಿಸಿವೆ. ಈ ವಿಚಾರವಾಗಿ ಬಿಜೆಪಿ-ಜೆಡಿಎಸ್ ಮೈತ್ರಿಕೂಟದ ಸದಸ್ಯರು ವಿಧಾನಸಭೆ ಹಾಗೂ ವಿಧಾನ ಪರಿಷತ್‌ನ ಕಲಾಪಕ್ಕೆ


ಉದಯವಾಹಿನಿ ಚಿತ್ರ

ಅಡ್ಡಿಪಡಿಸಿದ್ದಾರೆ. ಇದರ ಜೊತೆಗೆ ಜಗಳೂರಿನಿಂದ ಬಳ್ಳಾರಿವರೆಗೆ ಪಾದಯಾತ್ರೆ ನಡೆಸಲು ಬಿಜೆಪಿ-ಜೆಡಿಎಸ್ ಮೈತ್ರಿಕೂಟ ಯೋಜನೆ ರೂಪಿಸಿದೆ.ಈ ಹಗರಣದ ಕುರಿತು ಜಾರಿ ನಿರ್ದೇಶನಾಲಯ ಈಗಾಗಲೇ ತನಿಖೆ ನಡೆಸಿ ಆರೋಪಪಟ್ಟಿ ಸಲ್ಲಿಸಿದೆ. ಇದೀಗ ಸಿಬಿಐ ಕೂಡ ನಾಗೇಂದ್ರ ವಿರುದ್ಧ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರ ಅನುಮತಿ ಕೋರಿರುವುದರಿಂದ ಪ್ರಕರಣ ಮತ್ತಷ್ಟು ವೇಗ ಪಡೆದುಕೊಳ್ಳುವ ಸಾಧ್ಯತೆಯಿದೆ. ಇದು ಸಚಿವರ ಸಂಪುಟದಲ್ಲಿ ನಾಗೇಂದ್ರ ಅವರ ಮುಂದುವರಿಕೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ಸರ್ಕಾರದ ಮೇಲಿನ ಒತ್ತಡವನ್ನೂ ಹೆಚ್ಚಿಸುವ ಸಾಧ್ಯತೆಗಳಿವೆ ಎನ್ನಲಾಗುತ್ತಿದೆ.

ಭ್ರಷ್ಟಾಚಾರ ತಡೆ ಕಾಯ್ದೆಯ ಸೆಕ್ಷನ್ 19ರ ಅಡಿಯಲ್ಲಿ ಸಾರ್ವಜನಿಕ ಸೇವಕರ ವಿರುದ್ಧದ ಅಪರಾಧವನ್ನು ನ್ಯಾಯಾಲಯ ಪರಿಗಣನೆಗೆ ತೆಗೆದುಕೊಳ್ಳಲು ಪ್ರಾಸಿಕ್ಯೂಷನ್‌ಗೆ ಅನುಮತಿ ಕಡ್ಡಾಯವಾಗಿದೆ. ಸಿಬಿಐ ರಾಜ್ಯಪಾಲರಿಂದ ಅನುಮತಿ ಕೋರಿರುವುದರಲ್ಲಿ ಆಶ್ಚರ್ಯಪಡುವಂಥದ್ದೇನೂ ಇಲ್ಲ ಎಂದೂ ಅವರು ತಿಳಿಸಿದ್ದಾರೆ.

**ಇದೇ ವೇಳೆ, ನಾಗೇಂದ್ರ ವಿರುದ್ಧ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರ ಅನುಮತಿ ಕೋರಿರುವ ಸಿಬಿಐ ಕ್ರಮಕ್ಕೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ.ಸಿಬಿಐ ಮೊದಲು ರಾಜ್ಯ ಸರ್ಕಾರವನ್ನು ಸಂಪರ್ಕಿಸಬೇಕಿತ್ತು. ನಾಗೇಂದ್ರ ಅವರ ವಿರುದ್ಧದ ಪ್ರಕರಣದಲ್ಲಿ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಲು ಸಿಬಿಐ ಯಾವ ಆಧಾರದಲ್ಲಿ ನಿರ್ಧರಿಸಿದೆ ಎಂಬುದು ನನಗೆ ತಿಳಿದಿಲ್ಲ ಎಂದು ಹೇಳಿದ್ದಾರೆ.-ಪ್ರಿಯಾಂಕ್ ಖರ್ಗೆ**

**ಈ ಪ್ರಕರಣದಲ್ಲಿ ಸಿಬಿಐ ತನಿಖೆ ನಡೆಸಿ ನಾಗೇಂದ್ರ ವಿರುದ್ಧ ಆರೋಪಪಟ್ಟಿ ಸಲ್ಲಿಸಿರುವ ಹಿನ್ನೆಲೆಯಲ್ಲಿ, ರಾಜ್ಯಪಾಲರು ಸಮರ್ಥ ಪ್ರಾಧಿಕಾರಿಯಾಗಿರುವ ಕಾರಣ ಅವರಿಂದ ಅನುಮತಿ ಕೋರಿರಬಹುದು ಎಂದು ಹೇಳಿದ್ದಾರೆ.**
**ಸಲಹೆಗಾರ ಎ.ಎಸ್. ಪೊನ್ನಣ್ಣ**

# ವೈದ್ಯರ ದಿನಾಚರಣೆ, ಸಾಧಕ ವೈದ್ಯರುಗಳಿಗೆ ಸನ್ಮಾನ-ವಿಸಿಎನ್ ಡಾಕ್ಟರ್ಸ್ ಅಸೋಸಿಯೇಷನ್

• ಉದಯವಾಹಿನಿ, ಬೆಂಗಳೂರು

ಮಲ್ಲತ್ತಹಳ್ಳಿ, ನಾಗರಭಾವಿಯಲ್ಲಿ ಕೊಡಗು ಗೌಡ ಸಮಾಜ ಸಭಾಂಗಣದಲ್ಲಿ ವಿಸಿಎನ್ ಡಾಕ್ಟರ್ಸ್ ವೆಲ್‌ಫೇರ್ ಅಸೋಸಿಯೇಷನ್ ವತಿಯಿಂದ ವೈದ್ಯರ ದಿನಾಚರಣೆ ಮತ್ತು ಸಾಧಕ ವೈದ್ಯರಿಗೆ ಡಾ.ಎಂ.ಸುನಿಲ್ ಬಾಬು ಪ್ರಶಸ್ತಿ ಪ್ರಧಾನ ಕಾರ್ಯಕ್ರಮ. ಖ್ಯಾತ ವಿಜ್ಞಾನಿ ಪ್ರೊ.ಡಾ. ಎಂ.ಕೆ.ಸುದರ್ಶನ್, ಆರ್.ವಿ.ಡೆಂಟಲ್ ಕಾಲೇಜು ಮಾಜಿ ಡೀನ್ ಡಾ.ನಾಗೇಶ್, ವಿ.ಸಿ.ಎನ್.ಡಾಕ್ಟರ್ಸ್ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರಾದ ಡಾ. ಭೋಜಮ್ಮ ನಿಕಟಪೂರ್ವ ಬಿಬಿಎಂಪಿ ಸದಸ್ಯರಾದ ಡಾ. ರಾಜು ಎಸ್.ರವರು ದೀಪ ಬೆಳಗಿಸಿ ಉದ್ಘಾಟನೆ ಮಾಡಿದರು. ಖ್ಯಾತ ವಿಜ್ಞಾನಿ ಡಾ.ಸುದರ್ಶನ್ ರವರು ಮತಾನಾಡಿ ರೋಗಿಗಳ ಸೇವೆಯೆ ಮೂಲ ಉದ್ದೇಶ ಅದರ ಜೊತೆಯಲ್ಲಿ ವೈದ್ಯರುಗಳ ಸುರಕ್ಷತೆ ಮುಖ್ಯ.

ವೈದ್ಯಕೀಯ ಸೇವೆ ಜೊತೆಯಲ್ಲಿ ಸಮಾಜ ಸೇವೆಯಲ್ಲಿಯೂ ನಿರತರಾಗಿದ್ದಾರೆ ವಿಸಿಎನ್ ಅಸೋಸಿಯೇಷನ್‌ರವರು. ವೈದ್ಯರು ಜನರ ಆರೋಗ್ಯ ರಕ್ಷಣೆಗೆ ಮುಖ್ಯ ಆದ್ಯತೆ ನೀಡಬೇಕು. ಮೂರು ವರ್ಷ ಕೊವಿಡ್ ಸಂದರ್ಭದಲ್ಲಿ ರಾಜ್ಯ ಸರ್ಕಾರದ


ಉದಯವಾಹಿನಿ ಚಿತ್ರ

ಆರೋಗ್ಯ ವಿಭಾಗದಲ್ಲಿ ವೈದ್ಯಕೀಯ ಸಲಹಾ ಸಮಿತಿಯಲ್ಲಿ ಸೇವೆ ಸಲ್ಲಿಸಿದೆ. ವೈದ್ಯವೃತ್ತಿಯಲ್ಲಿ ಹಲವಾರು ನೋವು, ಕಷ್ಟ ಎದುರಿಸಬೇಕಾಗುತ್ತದೆ. ತಾಳ್ಮೆ, ಧೈರ್ಯದಿಂದ ವೈದ್ಯ ವೃತ್ತಿಯಲ್ಲಿ ತೊಡಗಿ ಎಂದು ಹೇಳಿದರು. ಡಾ.ನಾಗೇಶ್‌ರವರು ಮಾತನಾಡಿ ದೇವರ ನಂತರ ವೈದ್ಯರುಗಳನ್ನ ದೇವರ ಸಮಾನವಾಗಿ ಜನರು ನೋಡುತ್ತಾರೆ. ಕೊವಿಡ್ ಸಂದರ್ಭದಲ್ಲಿ ವೈದ್ಯರು, ಸಿಬ್ಬಂದಿಗಳು ಪ್ರಾಣದ ಹಂಗು

**ವಿಸಿಎನ್ ಡಾಕ್ಟರ್ಸ್ ಅಸೋಸಿಯೇಷನ್ ಸಂಸ್ಥೆಯಲ್ಲಿ 400ಕ್ಕೂ ಹೆಚ್ಚು ವೈದ್ಯರುಗಳು ಸದಸ್ಯರಿದ್ದಾರೆ. ಹಿರಿಯ ವೈದ್ಯರುಗಳು ಕಿರಿಯ ವೈದ್ಯರುಗಳಿಗೆ ಸಲಹೆ, ಮಾರ್ಗದರ್ಶನ ವೈದ್ಯಕೀಯ ಕ್ಷೇತ್ರದ ಹೊಸ ಅನುಭವಗಳ ಹಂಚಿಕೆ ಮಾಡುವ ಸಂಸ್ಥೆಯಾಗಿದೆ. ಡಾ.ಎಸ್.ರಾಜು**

ತೊರೆದು ಜನರ ಜೀವ ರಕ್ಷಣೆಗಾಗಿ ಹೋರಾಡಿದರು. ಆರೋಗ್ಯ ಕ್ಷೇತ್ರದಲ್ಲಿ ದೇಶ ಮುಂದುವರೆದಿದೆ. ಶೇಕಡ 80ರಷ್ಟು ಜನರು ಖಾಸಗಿ ಆಸ್ಪತ್ರೆಗಳಿಗೆ ಹೋಗುತ್ತಾರೆ. ಎಐ ತಂತ್ರಜ್ಞಾನ ಬಂದಿದೆ ವೈದ್ಯರುಗಳು ಬಳಸಿಕೊಳ್ಳಬೇಕು ಎಂದು ಹೇಳಿದರು. ವೈದ್ಯರು ಮತ್ತು ರೋಗಿಗಳ ನಡುವೆ ಅಂತರ ಕಡಿಮೆಯಾಗಿದೆ. ವೈದ್ಯರುಗಳ ಮೇಲೆ ಜನರ ನಂಬಿಕೆ ಇಲ್ಲದಂತೆ ಆಗಿದೆ ಇದೆಲ್ಲ ಹೋಗಲಾಡಿಸಲು ವಿಸಿಎನ್ ಡಾಕ್ಟರ್ಸ್ ಅಸೋಸಿಯೇಷನ್ ಶ್ರಮಿಸುತ್ತಿದೆ.

ಕೆಲಸದ ಒತ್ತಡದ ನಡುವೆ ವೈದ್ಯರುಗಳು ಕುಟುಂಬದ ಕಡೆ ಗಮನಹರಿಸುತ್ತಿಲ್ಲ. ವೈದ್ಯ ವೃತ್ತಿಯ ಜೊತೆಯಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರ, ವೃದ್ಧಶ್ರಾಮ, ಆನಾಥಶ್ರಮ ಸಹಾಯಹಸ್ತ ಮತ್ತು ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಪ್ರತಿ ತಿಂಗಳು ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು. ಅಧ್ಯಕ್ಷರಾದ ಡಾ.ಭೋಜಮ್ಮರವರು ಮಾತನಾಡಿ ಜನರ ಸೇವೆಗಾಗಿಯೆ ವಿಸಿಎನ್ ಡಾಕ್ಟರ್ಸ್ ಅಸೋಸಿಯೇಷನ್ ಪ್ರಾರಂಭಿಸಲಾಗಿದೆ.

ಸಾಮಾಜಿಕ ಸೇವಾ ಕಾರ್ಯಗಳನ್ನು ಹಮ್ಮಿಕೊಳ್ಳಲಾಗಿದೆ. ವೈದ್ಯಕೀಯ ಕ್ಷೇತ್ರದ ಆಧುನಿಕ ತಂತ್ರಜ್ಞಾನದ ಮೂಲಕ ರೋಗಿಗಳ ಚಿಕಿತ್ಸೆ ನೀಡುವುದು ಮತ್ತು ವೈದ್ಯರುಗಳ ಜೊತೆಯಲ್ಲಿ ಸಮಾಲೋಚನೆ ಮಾಡಿ ಮೊಬೈಲ್ ಗೀಳು, ಮತ್ತು ಬರೆಸುವ ಪದಾರ್ಥ ಮಕ್ಕಳು ಅರಿವು ಮೂಡಿಸುವುದು.

ಉಚಿತ ಆರೋಗ್ಯ ತಪಾಸಣೆ ಸರ್ಕಾರಿ ಶಾಲೆಗಳಲ್ಲಿ ಆಯೋಜಿಸಲಾಗುತ್ತಿದೆ ಎಂದು ಹೇಳಿದರು.ಸಾಧಕ ವೈದ್ಯರುಗಳಾದ ಡಾಎಸ್.ರಾಜು, ಡಾ.ಹರೀಶ್, ಡಾ.ಜಲಜಾ, ಡಾ.ಜೀವೆಂದರ್ ಬಸ್ತಿ , ಡಾ.ಕೇಶವಮೂರ್ತಿ, ಡಾ. ಶ್ರೀನಿವಾಸ್ ರವರು ಪ್ರಶಸ್ತಿ ಪ್ರಧಾನ ಮಾಡಲಾಯಿತು. ಡಾ.ಚಂದ್ರಶೇಖರ್, ಡಾ.ರಮೇಶ್ ಬಿ.ಟಿ, ಡಾ.ಚಂದ್ರಕಲಾ, ಡಾ. ಶಂಕರಲಿಂಗಯ್ಯ, ಡಾ. ಮಂಜುನಾಥ್ ಕೋಡಿಹಳ್ಳಿ, ಡಾ.ಶ್ರೇಯಸ್ ರವರು ಮತ್ತು ವಿಸಿನ್ ಡಾಕ್ಟರ್ ವೇಲ್ ಫೇರ್ ಅಸೋಸಿಯೇಷನ್ ಸದಸ್ಯರುಗಳು ಭಾಗವಹಿಸಿದ್ದರು.

# ದೇವಾಲಯಗಳಿಗಿಂತ ಶಾಲೆಗಳ ಅಭಿವೃದ್ಧಿಗೆ ಹೆಚ್ಚಿನ ಮಹತ್ವ ನೀಡಿ

• ಉದಯವಾಹಿನಿ, ಬೆಂಗಳೂರು

ಎಲ್‌ಕೆಜಿಯಿಂದ 12ನೇ ತರಗತಿ (ದ್ವಿತೀಯ ಪಿಯುಸಿ)ವರೆಗೆ ಕನ್ನಡ ಮತ್ತು ಇಂಗ್ಲಿಷ್ ಮಾಧ್ಯಮಗಳಲ್ಲಿ ಒಂದೇ ಸೂರಿನಡಿ ಗುಣಮಟ್ಟದ ಶಿಕ್ಷಣ ಒದಗಿಸುವ ಗುರಿಯನ್ನು ಹೊಂದಿರುವ ಕರ್ನಾಟಕ ಪಬ್ಲಿಕ್ ಶಾಲೆಗಳು' ರಾಜ್ಯ ಸರ್ಕಾರದ ಒಂದು ಮಹತ್ವಾಕಾಂಕ್ಷೆಯ ಯೋಜನೆಯಾಗಿದೆ ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದರು.

ಅಜಾಕ್ಸ್ ಇಂಜಿನಿಯರಿಂಗ್ ಚಾರಿಟಬಲ್ ಟ್ರಸ್ಟ್‌ನ ಕಾರ್ಪೊರೇಟ್ ಸೋಶಿಯಲ್ ರೆಸ್ಪಾನ್ಸಿಬಲಿಟಿ ಉಪಕ್ರಮದಡಿ 13.5 ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ಹೊಸ ಕರ್ನಾಟಕ ಪಬ್ಲಿಕ್ ಶಾಲೆಯ ಕಟ್ಟಡಕ್ಕೆ ಶಂಕುಸ್ಥಾಪನೆ ನೆರವೇರಿಸಿದ ನಂತರ ಮಾತನಾಡಿದರು. ಈ ಕಾರ್ಯಕ್ರಮವನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಶಿವಮೊಗ್ಗದ ಅಜಾಕ್ಸ್ ಇಂಜಿನಿಯರಿಂಗ್ ಲಿಮಿಟೆಡ್ ಹಾಗೂ ಅಜಾಕ್ಸ್ ಇಂಜಿನಿಯರಿಂಗ್ ಚಾರಿಟಬಲ್ ಟ್ರಸ್ಟ್ ಜಂಟಿಯಾಗಿ ಆಯೋಜಿಸಿದ್ದವು.

ಮಕ್ಕಳ ಉತ್ತಮ ಭವಿಷ್ಯ ರೂಪಿಸಲು ಶಿಕ್ಷಣ ಇಲಾಖೆಯಲ್ಲಿ ಹಲವು ಮಹತ್ವದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಮತ್ತು ಇಂದು ತಮ್ಮ ಇಲಾಖೆಗೆ ಅತ್ಯಂತ ಮಹತ್ವದ ದಿನವಾಗಿದೆ ಎಂದು ಸಚಿವರು ಹೇಳಿದರು.

ನಮ್ಮ ಶಾಲೆ, ನಮ್ಮ ಜವಾಬ್ದಾರಿ' ಪರಿಕಲ್ಪನೆಯಡಿ, ಸಮುದಾಯದ

**ಶಿವಮೊಗ್ಗ ಜಿಲ್ಲೆಯಲ್ಲಿ ಈಗಾಗಲೇ 11 ಕೆಪಿಎಸ್ ಶಾಲೆಗಳು ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿವೆ ಮತ್ತು ಏಷ್ಯನ್ ಡೆವಲಪ್‌ಮೆಂಟ್ ಬ್ಯಾಂಕ್‌ನ ನೆರವಿನೊಂದಿಗೆ ಇನ್ನೂ 24 ಕೆಪಿಎಸ್ ಶಾಲೆಗಳಿಗೆ ಮಂಜೂರಾತಿ ನೀಡಲಾಗಿದೆ ಎಂದು ಅವರು ತಿಳಿಸಿದರು.**


ಉದಯವಾಹಿನಿ ಚಿತ್ರ

ಸಹಭಾಗಿತ್ವದೊಂದಿಗೆ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ. ಮಕ್ಕಳ ಭವಿಷ್ಯವನ್ನು ರೂಪಿಸುವ ಶಿಕ್ಷಣ ಇಲಾಖೆಯ ಜವಾಬ್ದಾರಿ ಅತ್ಯಂತ ಮಹತ್ತರವಾದುದರಿಂದ, ಜನರು ದೇವಾಲಯಗಳಿಗಿಂತ ಶಾಲೆಗಳ ಅಭಿವೃದ್ಧಿಗೆ ಹೆಚ್ಚಿನ ಮಹತ್ವ ನೀಡುವ ಮನಸ್ಥಿತಿಯನ್ನು ಬೆಳೆಸಿಕೊಳ್ಳಬೇಕು ಎಂದು ಅವರು ಹೇಳಿದರು.

ಕರ್ನಾಟಕ ಪಬ್ಲಿಕ್ ಶಾಲೆಗಳು ರಾಜ್ಯ ಸರ್ಕಾರದ ಒಂದು ಮಹತ್ವಾಕಾಂಕ್ಷೆಯ ಯೋಜನೆಯಾಗಿದ್ದು, ಇವುಗಳ ಉದ್ದೇಶವು ಎಲ್‌ಕೆಜಿಯಿಂದ ದ್ವಿತೀಯ ಪಿಯುಸಿವರೆಗೆ ಒಂದೇ ಸೂರಿನಡಿ ಕನ್ನಡ ಮತ್ತು ಇಂಗ್ಲಿಷ್ ಮಾಧ್ಯಮಗಳಲ್ಲಿ ಗುಣಮಟ್ಟದ ಶಿಕ್ಷಣ ಒದಗಿಸುವುದಾಗಿದೆ.

# ಅರಣ್ಯ ವಲಯದಲ್ಲಿ ಹೆಚ್ಚಿದ ಬೇಟೆಗಾರರ ಹಾವಳಿ: 16 ವರ್ಷಗಳಲ್ಲಿ 3,289 ಪ್ರಕರಣ ದಾಖಲು..!

• ಉದಯವಾಹಿನಿ, ಬೆಂಗಳೂರು

ಕಟ್ಟುನಿಟ್ಟಿನ ಕ್ರಮಗಳ ನಡುವೆಯೂ ಕರ್ನಾಟಕದಲ್ಲಿ ವನ್ಯಜೀವಿ ಸಂಬಂಧಿತ ಅಪರಾಧ ಪ್ರಕರಣಗಳು ಹೆಚ್ಚುತ್ತಲೇ ಇವೆ. ರಾಜ್ಯ ಅರಣ್ಯ ಇಲಾಖೆ ಅಂಕಿಅಂಶಗಳ ಪ್ರಕಾರ, 2010-11ರಿಂದ 2026ರ ಆಗಸ್ಟ್ 19ರವರೆಗೆ ಚಾಮರಾಜನಗರ ವಲಯದಲ್ಲಿ ಒಟ್ಟು 3,289 ವನ್ಯಜೀವಿ ಸಂಬಂಧಿತ ಪ್ರಕರಣಗಳು ದಾಖಲಾಗಿವೆ.

ಚಾಮರಾಜನಗರ ವಲಯದ ವ್ಯಾಪ್ತಿಯಲ್ಲಿ ಕಾವೇರಿ ವನ್ಯಜೀವಿ ಧಾಮ ಮಲೆ ಮಹದೇಶ್ವರ ವನ್ಯಜೀವಿ ಧಾಮ ಹಾಗೂ ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶಗಳು ಒಳಗೊಂಡಿವೆ. ಅಂಕಿಅಂಶಗಳ ಪ್ರಕಾರ, ಈ ಅರಣ್ಯ ವಿಭಾಗಗಳಲ್ಲಿ 777 ಅರಣ್ಯ ಅಪರಾಧಗಳು, 370 ಬೇಟೆ ಪ್ರಕರಣಗಳು ಹಾಗೂ ಗನ್ ಮತ್ತು ಇತರ ಶಸ್ತ್ರಾಸ್ತ್ರಗಳ ಬಳಕೆಗೆ ಸಂಬಂಧಿಸಿದ 66 ಪ್ರಕರಣಗಳು ದಾಖಲಾಗಿವೆ.

ಮಲೆ ಮಹದೇಶ್ವರ ವನ್ಯಜೀವಿ ಧಾಮದಲ್ಲಿ ಒಟ್ಟು 2,256 ವನ್ಯಜೀವಿ ಅಪರಾಧ ಪ್ರಕರಣಗಳು ದಾಖಲಾಗಿವೆ. ಈ ಅವಧಿಯಲ್ಲಿ ಕೊಳ್ಳೇಗಾಲದ ಮಲೆ ಮಹದೇಶ್ವರ ವನ್ಯಜೀವಿ ಧಾಮದ ಬಫರ್


ಉದಯವಾಹಿನಿ ಚಿತ್ರ

ವಲಯದಲ್ಲಿ ಅತಿ ಹೆಚ್ಚು 979 ಅರಣ್ಯ ಅಪರಾಧ ಪ್ರಕರಣಗಳು ದಾಖಲಾಗಿವೆ. ಇದೇ ಪ್ರದೇಶದಲ್ಲಿ ಗನ್ ಬಳಕೆಯ 17 ಪ್ರಕರಣಗಳು ಹಾಗೂ 97 ಬೇಟೆ ಪ್ರಕರಣಗಳು ದಾಖಲಾಗಿವೆ.

ಚಾಮರಾಜನಗರ ವಲಯವು ಭೌಗೋಳಿಕವಾಗಿ ಮಹತ್ವದ ಪ್ರದೇಶವಾಗಿದ್ದು, ಇಲ್ಲಿನ ಅರಣ್ಯ ಪ್ರದೇಶಗಳು ಕೇರಳ ಮತ್ತು ತಮಿಳುನಾಡಿನ ಗಡಿಗೆ ಹೊಂದಿಕೊಂಡಿವೆ. ಹೀಗಾಗಿ ವನ್ಯಜೀವಿ ಅಪರಾಧಗಳನ್ನು ನಿಯಂತ್ರಿಸುವುದು ಸವಾಲಿನ ಕೆಲಸವಾಗಿದೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.


# ಉದ್ಯಾನವನ ಭೂಮಿಯ 5 ಪ್ರತಿಶತ ಭೂಮಿ ಮಾರಾಟಕ್ಕೆ ಸಂಪುಟ ಅನುಮೋದನೆ!

## ಕರ್ನಾಟಕದ ಕಾಂಗ್ರೆಸ್ ಸರ್ಕಾರ ಅಧಿಕೃತವಾಗಿ ನಮ್ಮ ಉದ್ಯಾನವನಗಳು ಮತ್ತು ಹಸಿರು ಸ್ಥಳಗಳ ವಿರುದ್ಧ ಯುದ್ಧವನ್ನು ಪ್ರಾರಂಭಿಸಿದೆ

• ಉದಯವಾಹಿನಿ, ಬೆಂಗಳೂರು

**1** ಪ್ರಸ್ತಾವಿತ ಭೂಮಿಯ ಬಳಕೆಯನ್ನು
**2** ಕಬ್ಬನ್ ಪಾರ್ಕ್ ಮತ್ತು ಲಾಲ್‌ಬಾಗ್
**3** ವಿನಿಮಯ ಅಥವಾ ಅಡಮಾನದ

ಸರ್ಕಾರಿ ಉದ್ಯಾನವನಗಳು (ಸಂರಕ್ಷಣೆ) ಕಾಯ್ದೆ, 1975 ಕ್ಕೆ ತಿದ್ದುಪಡಿ ತರುವ ಮಸೂದೆಯನ್ನು ಕರ್ನಾಟಕ ಸಚಿವ ಸಂಪುಟ ಅನುಮೋದಿಸಿದೆ. ಇದು ಉದ್ಯಾನವನ ಮತ್ತು ಉದ್ಯಾನ ಭೂಮಿಯ ಕೆಲವು ಭಾಗಗಳನ್ನು ಸಾರ್ವಜನಿಕ ಮೂಲಸೌಕರ್ಯ ಮತ್ತು ಉಪಯುಕ್ತತೆ ಯೋಜನೆಗಳಿಗೆ ಬಳಸಲು ಅನುವು ಮಾಡಿಕೊಡುತ್ತದೆ, ಇದನ್ನು ಪರಿಸರ ಆಧಾರದ ಮೇಲೆ ಬಿಜೆಪಿ ವಿರೋಧಿಸಿದೆ. ಸಭೆ ಸೇರಿದ್ದ ಸಚಿವ ಸಂಪುಟ, ಕಬ್ಬನ್ ಪಾರ್ಕ್ ಮತ್ತು ಲಾಲ್‌ಬಾಗ್ ಸೇರಿದಂತೆ ಬೆಂಗಳೂರಿನ ಪ್ರಮುಖ ಹಸಿರು ಸ್ಥಳಗಳನ್ನು ನಿಯಂತ್ರಿಸುವ ಕಾಯ್ದೆಗೆ ಪ್ರಸ್ತಾವಿತ ತಿದ್ದುಪಡಿಗಳನ್ನು ಅನುಮೋದಿಸಿದೆ ಎಂದು ಮೂಲಗಳು ತಿಳಿಸಿವೆ. ತಿದ್ದುಪಡಿಯಡಿಯಲ್ಲಿ, ಯಾವುದೇ ಉದ್ಯಾನವನ ಅಥವಾ ಉದ್ಯಾನದ ಒಟ್ಟು ವ್ಯಾಪ್ತಿಯ 5 ಪ್ರತಿಶತದಷ್ಟು ಭಾಗವನ್ನು ಮಾರಾಟ, ಗುತ್ತಿಗೆ, ಉಡುಗೊರೆ, ವಿನಿಮಯ ಅಥವಾ ಅಡಮಾನದ ಮೂಲಕ ನಿರ್ದಿಷ್ಟ ಸಾರ್ವಜನಿಕ ಉದ್ದೇಶಗಳಿಗಾಗಿ ಪರಭಾರೆ ಮಾಡಲು ಈ ತಿದ್ದುಪಡಿ ಅವಕಾಶ ನೀಡುತ್ತದೆ.ಪ್ರಸ್ತಾವಿತ ಶಾಸನದ ಪ್ರಕಾರ, ಸರ್ಕಾರಿ ಇಲಾಖೆಗಳು, ಶಾಸನಬದ್ಧ ಪ್ರಾಧಿಕಾರಗಳು, ಸರ್ಕಾರಿ ಸ್ವಾಮ್ಯದ ಕಂಪನಿಗಳು ಮತ್ತು ಸ್ಥಳೀಯ ಪ್ರಾಧಿಕಾರಗಳು ಮಾತ್ರ ಸಾರ್ವಜನಿಕ ಮೂಲಸೌಕರ್ಯ ಅಥವಾ ಉಪಯುಕ್ತತೆ ಯೋಜನೆಗಳಿಗೆ ಪರಭಾರೆ ಮಾಡಿದ ಭಾಗಗಳನ್ನು ಬಳಸಲು ಅನುಮತಿಸಲಾಗುತ್ತದೆ. ಹೆಬ್ಬಾಳ


ಉದಯವಾಹಿನಿ ಚಿತ್ರ

**ಬೆಂಗಳೂರು ದಕ್ಷಿಣ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಅವರು ಸಂಪುಟದ ನಿರ್ಧಾರವನ್ನು ಟೀಕಿಸಿ, ಸುರಂಗ ರಸ್ತೆ ಯೋಜನೆಗೆ ಲಾಲ್‌ಬಾಗ್ ಭೂಮಿಯನ್ನು ಬಳಸಲು ಅನುಕೂಲವಾಗುವಂತೆ ಮಾಡಲು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಆರೋಪಿಸಿದರು.-ತೇಜಸ್ವಿ ಸೂರ್ಯ**

ಮತ್ತು ಕೇಂದ್ರ ರೇಷ್ಮೆ ಮಂಡಳಿಯನ್ನು ಸಂಪರ್ಕಿಸುವ ಪ್ರಸ್ತಾವಿತ 17-ಕಿಮೀ ಸುರಂಗ ರಸ್ತೆ ಯೋಜನೆಯ ಸಂದರ್ಭದಲ್ಲಿ ಈ ತಿದ್ದುಪಡಿ ಮಹತ್ವದ್ದಾಗಿದೆ. ಈ ಯೋಜನೆಗೆ ತಾತ್ಕಾಲಿಕವಾಗಿ ಸುಮಾರು ಆರು ಎಕರೆ ಲಾಲ್‌ಬಾಗ್ ಭೂಮಿಯು ಮತ್ತು ಶಾಶ್ವತವಾಗಿ ಒಂದು ಎಕರೆ ಭೂಮಿಯ ಅಗತ್ಯವಿದೆ ಎಂದು ಮೂಲಗಳು ತಿಳಿಸಿವೆ. ಸಚಿವ ಸಂಪುಟದ ನಿರ್ಧಾರವನ್ನು ಮೂರ್ಖತನ ಎಂದು ಅವರು ಬಣ್ಣಿಸಿದರು ಮತ್ತು ಇದು ರಾಜ್ಯಾದ್ಯಂತ ಉದ್ಯಾನವನಗಳಲ್ಲಿ ರಿಯಲ್ ಎಸ್ಟೇಟ್ ಅಭಿವೃದ್ಧಿಗೆ ಅನುಕೂಲವಾಗುತ್ತದೆ ಎಂದು ಆರೋಪಿಸಿದರು. ಸುರಂಗ ರಸ್ತೆ ಯೋಜನೆ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ) ಕಾಯ್ದೆಯನ್ನು ಉಲ್ಲಂಘಿಸಿದೆ ಎಂಬ ಕಾರಣಕ್ಕಾಗಿ ನ್ಯಾಯಾಲಯದಲ್ಲಿ ಪ್ರಶ್ನಿಸಲಾಗಿದೆ ಎಂದು ಸೂರ್ಯ ಹೇಳಿದರು. ಈಗ, ನ್ಯಾಯಾಲಯದ ವಿಚಾರಣೆಯನ್ನು ತಪ್ಪಿಸಲು, ರಾಜ್ಯ ಸರ್ಕಾರ ಈ ಮಸೂದೆಯನ್ನು ತಂದಿದೆ ಎಂದು ಅವರು ಆರೋಪಿಸಿದರು.

ಉಳಿದ ನೈಸರ್ಗಿಕ ಪರಿಸರ ವ್ಯವಸ್ಥೆಯನ್ನು ರಕ್ಷಿಸುವ ಉದ್ದೇಶದೊಂದಿಗೆ, ಬಿಜೆಪಿ ರಾಜ್ಯ ಅಧ್ಯಕ್ಷ ಬಿ ವೈ ವಿಜಯೇಂದ್ರ ಈ ಮಸೂದೆ ಬಗ್ಗೆ ಪ್ರತಿಕ್ರಿಯೆ ನೀಡಿದ್ದು, ತಮ್ಮ ಪಕ್ಷ ಮಸೂದೆಯನ್ನು ವಿರೋಧಿಸುತ್ತದೆ ಎಂದು ಹೇಳಿದರು. ಪರಿಸರ ಮತ್ತು ನಾಗರಿಕರ ಕಲ್ಯಾಣಕ್ಕೆ ಹಾನಿಕಾರಕವಾದ ಪ್ರಸ್ತಾವಿತ ಮಸೂದೆಯನ್ನು ತಡೆಯಲು ಬಿಜೆಪಿ ಸಾಧ್ಯವಿರುವ ಪ್ರಯತ್ನಗಳನ್ನು ಮಾಡುತ್ತದೆ ಎಂದು ಅವರು ಹೇಳಿದರು. ಪ್ರಸ್ತಾವಿತ ಶಾಸನವನ್ನು ರಾಜ್ಯ ವಿಧಾನಸಭೆಯ ನಡೆಯುತ್ತಿರುವ ಅಧಿವೇಶನದಲ್ಲಿ ಪರಿಗಣನೆ ಮತ್ತು ಅಂಗೀಕಾರಕ್ಕಾಗಿ ಕೈಗೆತ್ತಿಕೊಳ್ಳುವ ನಿರೀಕ್ಷೆಯಿದೆ.

**ಕರ್ನಾಟಕ ವಿಧಾನಸಭೆಯಲ್ಲಿ ಮಹತ್ವದ ಮಸೂದೆ ವಿರೋಧಿಸಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ, ವಿರೋಧ ಪಕ್ಷದ ನಾಯಕ ಆರ್. ಅಶೋಕ ಮತ್ತು ಶಾಸಕರಿಗೆ ಪತ್ರ ಬರೆಯುವುದಾಗಿ ಹೇಳಿದರು.-ತೇಜಸ್ವಿ ಸೂರ್ಯ**

### ಉನ್ನತ ಮಟ್ಟದ ಸಮಿತಿ ರಚನೆ

**ಮಸೂದೆಯ ಪ್ರಕಾರ, ಉದ್ಯಾನ ಅಥವಾ ಉದ್ಯಾನ ಭೂಮಿಯ ಬಳಕೆಯನ್ನು ಶಿಫಾರಸು ಮಾಡಲು ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಶ್ರೇಣಿಯ ಅಧಿಕಾರಿಯ ನೇತೃತ್ವದಲ್ಲಿ ಮತ್ತು ಡೊಮೇನ್ ತಜ್ಞರನ್ನು ಒಳಗೊಂಡ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗುವುದು.**

